# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

| ಸಂಪುಟ –೧೫೬<br>**Volume - 156** | ಬೆಂಗಳೂರು, ಶುಕ್ರವಾರ, ೨೪, ಜೂನ್, ೨೦೨೨(**ಆಷಾಢ**, ೦೩, ಶಕವರ್ಷ, ೧೯೪೪)<br>**BENGALURU, FRIDAY, 24, JUNE, 2022(ASHADHA, 03, SHAKAVARSHA, 1944)** | ಸಂಚಿಕೆ ೧೨೪<br>**Issue 124** |
|---|---|---|


## ಭಾಗ ೫

## ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

**ಕರ್ನಾಟಕ ಸರ್ಕಾರ**

**(ಜಲ ಸಂಪನ್ಮೂಲ ಇಲಾಖೆ)**

**ಅಧ್ಯಕ್ಷರು, ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ನೇಮಕಾತಿಗಾಗಿ ಆಯ್ಕೆ ಸಮಿತಿ ಹಾಗೂ ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದ ರಾವ್ ವೃತ್ತ, ಬೆಂಗಳೂರು–560 009.**

## ಅಧಿಸೂಚನೆ

ಅಧಿಸೂಚನೆ ಸಂಖ್ಯೆ:ಜಸಅ/205/ಇಎಸ್‌ಎಂ/ದ್ವಿದಸ/ಬ್ಯಾಕ್‌ಲಾಗ್/2021 ದಿನಾಂಕ:24–06–2022

ವಿಷಯ: ಜಲ ಸಂಪನ್ಮೂಲ ಇಲಾಖೆಯಲ್ಲಿ ಗ್ರೂಪ್–ಸಿ ವೃಂದದ ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್‌ಬಿಸಿ 2001 ದಿನಾಂಕ: 21–11–2001.

2. ಸರ್ಕಾರದ ಪತ್ರದ ಸಂಖ್ಯೆ: ಜಸಂಇ 47 ಸೇಸಕಿ 2018 ದಿನಾಂಕ: 07–08–2021.

1. **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: 11–07–2022 ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 10–08–2022 ಸಂಜೆ: 5:30 ಘಂಟೆಯೊಳಗೆ**
2. **ವೆಬ್‌ಸೈಟ್ ವಿಳಾಸ : https://waterresources.karnataka.gov.in**

ಕರ್ನಾಟಕ ನಾಗರಿಕ ಸೇವಾ (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದ ಭರ್ತಿಯಾಗದೆ ಖಾಲಿ ಉಳಿದಿರುವ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಾವಳಿಗಳು 2001 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಬ್ಲ್ಯೂಆರ್‌ಡಿ 293 ಸೇಸಕಿ 2005 ದಿನಾಂಕ: 03–12–2014 ರಲ್ಲಿ ಹೊರಡಿಸಲಾದ ಜಲ ಸಂಪನ್ಮೂಲ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಮತ್ತು ಕಾಲಕಾಲಕ್ಕೆ ಹೊರಡಿಸಲಾದ ತಿದ್ದುಪಡಿಗಳನುಸಾರ, ಜಲ ಸಂಪನ್ಮೂಲ ಇಲಾಖೆಯ ಗ್ರೂಪ್–ಸಿ ವೃಂದದ ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ (ಔಟ–ಟುಟಿಜ) ಮೂಲಕ ಆಹ್ವಾನಿಸಲಾಗಿದೆ.

**ಪರಿಶಿಷ್ಟ ಜಾತಿ: ಒಟ್ಟು ಹುದ್ದೆಗಳು-155**

| ಇತರೆ | ಮಹಿಳೆ | ಗ್ರಾಮೀಣ | ಮಾಸೈ | ಕಮಾಅ | ತೃಲಿಂ | ಅಂಗವಿಕಲತೆ ಹುದ್ದೆಗಳು | | ಯೋನಿಅ | ಒಟ್ಟು |
|---|---|---|---|---|---|---|---|---|---|
| **29** | **47** | **39** | **15** | **8** | **2** | **8** | | **7** | **155** |
| | | | | | | ಅಂಗವಿಕಲತೆ ಹುದ್ದೆಗಳನ್ನು ಈ ಕೆಳಕಡಂತೆ ವಿಂಗಡಿಸಿದೆ | ಸಂಖ್ಯೆ | | |
| | | | | | | ದೃಷ್ಟಿ ಮಾಂದ್ಯತೆಯುಳ್ಳವರಿಗೆ | 3 | | |
| | | | | | | ಶ್ರವಣ ದೋಷವುಳ್ಳವರಿಗೆ | 1 | | |
| | | | | | | ಚಲನವಲನ ವೈಕಲ್ಯವಿರುವವರಿಗೆ | 1 | | |
| | | | | | | ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರಿಗೆ | 1 | | |
| | | | | | | ಬುದ್ಧಿಮಾಂದ್ಯತೆ | 1 | | |
| | | | | | | ಮಾನಸಿಕ ಅಸ್ವಸ್ಥತೆ ಹೊಂದಿರುವವರಿಗೆ | 1 | | |

1. **ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳು 2001 ರನ್ವಯ ಭರ್ತಿ ಮಾಡಲಾಗುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ವಿಧಾನ:-**

ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದಿಲ್ಲ. ಈ ಹುದ್ದೆಗಳಿಗೆ ನೇಮಕಾತಿಯನ್ನು ಕರ್ನಾಟಕ ನಾಗರಿಕ ಸೇವಾ (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದ ಭರ್ತಿಯಾಗದೆ ಖಾಲಿ ಉಳಿದಿರುವ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಾವಳಿಗಳು 2001ರ ವಿಶೇಷ ನೇಮಕಾತಿ ನಿಯಮಗಳಂತೆ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಶೇಕಡಾವಾರು ಅಂಕಗಳು ಹಾಗೂ ವಯೋಮಿತಿ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದರಿಂದ ಈ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ.

**2. ಆಯ್ಕೆ ವಿಧಾನ:-**

1. ಮೇಲೆ ಹೇಳಿದ ನಿಯಮಾವಳಿಗಳಲ್ಲಿ ನಿಗದಿಪಡಿಸಿರುವಂತೆ ವಯಸ್ಸು ಹಾಗೂ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳ ಅರ್ಹತೆ ಆಧಾರದ ಮೇಲೆ ಆಯ್ಕೆಯನ್ನು ಮಾಡಲಾಗುವುದು.
2. ಕರ್ನಾಟಕ ನಾಗರಿಕ ಸೇವಾ (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದ ಭರ್ತಿಯಾಗದೆ ಖಾಲಿ ಉಳಿದಿರುವ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಾವಳಿಗಳು 2001ರನ್ವಯ, ಮೇಲ್ಕಂಡ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಲಾಗಿರುವ ಒಟ್ಟು ಅಂಕಗಳ ಶೇಕಡಾವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ (29 ವರ್ಷದೊಳಗಿನವರು) ಅಭ್ಯರ್ಥಿಗಳ ಒಂದು ಅರ್ಹತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಮತ್ತೊಂದು ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಅರ್ಹತಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಸದರಿ ಅರ್ಹತಾ ಪಟ್ಟಿಯಲ್ಲಿ ಸೂಕ್ತ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಮಾತ್ರ 18 ವರ್ಷದಿಂದ 28 ವರ್ಷಗಳ ವಯೋಮಿತಿಯ ಅರ್ಹತಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನಂತರದ ಆದ್ಯತೆ ನೀಡಲಾಗುವುದು.

**3. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು/ನೇಮಕಾತಿ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**4. ಶೈಕ್ಷಣಿಕ ವಿದ್ಯಾರ್ಹತೆ:–**

1. ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ಪದವಿ ಪೂರ್ವ ಪರೀಕ್ಷೆ.
2. ಸಿಬಿಎಸ್‌ಸಿ ಮತ್ತು ಐಎಸ್‌ಸಿ ಮಂಡಳಿಯು ನಡೆಸುವ ಕ್ಲಾಸ್ 10 + 2 ಪರೀಕ್ಷೆ.
3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ ಹೆಚ್.ಎಸ್.ಸಿ.
4. ಮೂರು ವರ್ಷಗಳ ಡಿಪ್ಲೊಮೊ ಅಥವಾ ಎರಡು ವರ್ಷಗಳ ಐ.ಟಿ.ಐ. ಕೋರ್ಸ್ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮೊ (ಜೆ.ಓ.ಸಿ./ಜೆ.ಓ.ಡಿ.ಸಿ./ಜೆ.ಎಲ್.ಡಿ.ಸಿ.) ಅಭ್ಯರ್ಥಿಗಳು ಎನ್.ಐ.ಓ.ಎಸ್.ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರ ಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಲಾಗುವುದು.
5. ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮೇಲೆ ನಮೂದಿಸಲಾದ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ತಪ್ಪಿದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. (ನಿಗದಿಪಡಿಸಿರುವ ವಿದ್ಯಾರ್ಹತೆಯನ್ನಲ್ಲದೆ, ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಮೇಲ್ಕಂಡ ಹುದ್ದೆಗಳಿಗೆ ಅಭ್ಯರ್ಥಿಗಳು ಹೊಂದಿರುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಮಾತ್ರ ಪರಿಗಣಿಸಿ, ಅದರಲ್ಲಿ ಗಳಿಸಲಾದ ಒಟ್ಟು ಅಂಕಗಳ ಶೇಕಡಾವಾರನ್ನು ಆಧರಿಸಿ ಅರ್ಹತೆಯನುಸಾರ ಆಯ್ಕೆ ಮಾಡಲಾಗುವುದರಿಂದ ಅಭ್ಯರ್ಥಿಗಳು ಅರ್ಜಿಯಲ್ಲಿ ವಿದ್ಯಾರ್ಹತೆಯಲ್ಲಿ ಗಳಿಸಲಾದ ಒಟ್ಟು ಶೇಕಡಾವಾರು ಅಂಕಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು)
6. ಮೇಲ್ಕಂಡ ವಿದ್ಯಾರ್ಹತೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಂಡು ಉತ್ತೀರ್ಣರಾಗಿರತಕ್ಕದ್ದು. ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದಿರುವ ಅಭ್ಯರ್ಥಿಗಳು, ಇಲಾಖೆಯು ಸೂಚಿಸುವ, ಸಂಸ್ಥೆಯಿಂದ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು. ಅಂತಹ ಅಭ್ಯರ್ಥಿಗಳ ಅರ್ಜಿಗಳು ಮಾತ್ರ ಪರಿಗಣನೆಗೆ ಅರ್ಹರಾಗಿರುತ್ತವೆ.

**5. ಹುದ್ದೆ ಮತ್ತು ವೇತನ ಶ್ರೇಣಿ:–**

ದ್ವಿತೀಯ ದರ್ಜೆ ಸಹಾಯಕರ ಬ್ಯಾಕ್‌ಲಾಗ್ ಹುದ್ದೆ (ಗ್ರೂಪ್–ಸಿ ವೃಂದ)
ರೂ.21400–500–24400–550–24600–600–27000–650–29600–750–32600–850–36000–950–39800–1100–42000 + ನಿಯಮಾನುಸಾರ ಕಾಲಕಾಲಕ್ಕೆ ಅನ್ವಯವಾಗುವ ಇತರೆ ಭತ್ಯೆಗಳು.

**6. ಪಿಂಚಣಿ ಸೌಲಭ್ಯ:–**

ಸಿವಿಲ್ ಸೇವೆಯಡಿಯ ದ್ವಿತೀಯ ದರ್ಜೆ ಸಹಾಯಕರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005 ದಿನಾಂಕ: 31.03.2006 ರಂತೆ ಪಿಂಚಣಿ ರಹಿತ (ಎನ್.ಪಿ.ಎಸ್)

**7. ವಯೋಮಿತಿ:–** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ) ಗರಿಷ್ಠ ವಯೋಮಿತಿ 40 ವರ್ಷ ಮೀರಿರಬಾರದು.

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**ಈ ಮುಂದಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಸಡಿಲಿಸಿ ಹೆಚ್ಚಿಸಲಾಗುವುದು.**

- ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡ ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ಮಂಡಳಿ/ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

- ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ ಐದು ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
- ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅವನು/ಅವಳು ಸಶಸ್ತ್ರದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ, ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:**

(ಎ) ಮಾಜಿ ಸೈನಿಕ ಎಂದರೆ ಸಶಸ್ತ್ರದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ)ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

(ಬಿ) ಕೇಂದ್ರ ಸಶಸ್ತ್ರದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು(ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು

ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಮೇಲ್ಕಂಡ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವರು

**ಅಥವಾ**

(ಇ) ಸ್ವಂತ ಕೋರಿಕೆ ಹೊರತು ಪಡಿಸಿ, ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

**ವಿವರಣೆ:** ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ, ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ, ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

- ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ, ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ, ಅಥವಾ ಹಿಂದೆಯಿದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.
- ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ, 10 ವರ್ಷಗಳ ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡಿರತಕ್ಕದ್ದು.
- ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು.

**8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:–**

ಪರಿಶಿಷ್ಟ ಜಾತಿ ಅಭ್ಯರ್ಥಿಗಳು ನಮೂನೆ ಡಿ ರಲ್ಲಿ ಸದರಿ ಅಧಿಸೂಚನೆಯನುಸಾರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

**9. ಗ್ರಾಮೀಣ ಅಭ್ಯರ್ಥಿ:**

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟು ಕೊಂಡಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ, ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2ರ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

**10. ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.

**11. ಅಂಗವಿಕಲ ಅಭ್ಯರ್ಥಿ:–**

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಉಪನಿಯಮ 2(ಕೆ)(ಜ) ರಲ್ಲಿ ನಿರ್ದಿಷ್ಟಪಡಿಸಿದ ಕ್ರಮ ಸಂಖ್ಯೆ: ನಿ ರಿಂದ ತು ರವರೆಗಿನಂತೆ, ದೃಷ್ಟಿ ಮಾಂದ್ಯತೆಯುಳ್ಳವರಿಗೆ, ಶ್ರವಣ ದೋಷವುಳ್ಳವರಿಗೆ, ಚಲನವಲನ ವೈಕಲ್ಯವಿರುವವರಿಗೆ, ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರಿಗೆ, ಬುದ್ಧಿಮಾಂದ್ಯತೆ, ಮಾನಸಿಕ ಅಸ್ವಸ್ಥತೆ ಹೊಂದಿರುವವರು (ಃಟುಟಿಜ, ಐಂತಿ ಝುಂಟಿ, ಐಜರಿಡಿಥಿ ಛಿಹಾಡಿಜಜ, ಙಾಜಚಿಡುಟಿರ ಎಟರಿಚುಡಿಟಜಟಿಣ, ಐಂಥಿಂಟಂಣಂಡಿ ಜುಚಿಛುಟುಣಥಿ, ಒಜಟಿಣಚಿಟ ಡಿಜಣಚಿಡಿಜಚಿಣುಂಟ & ಒಜಟಿಣಚಿಟ ಎಟಟಟಿಛ) ವೈಕಲ್ಯತೆಯ ಶೇ.40ಕ್ಕೆ ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ: 19–11–2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ, ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 74 ಸೆನೆನಿ 2006 ದಿನಾಂಕ: 30–01–2007 ರಲ್ಲಿ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯ ಮೀಸಲಾತಿ ಕೋರಿದ್ದಲ್ಲಿ, ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ನಿರ್ದಿಷ್ಟಪಡಿಸಿದ್ದು, ಸದರಿ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿಗೆ ಅಂಧ/ದೃಷ್ಟಿ ಮಾಂದ್ಯ ಅಭ್ಯರ್ಥಿಗಳ ಮೀಸಲಾತಿಯು ಬದ್ದವಾಗಿರುತ್ತದೆ.

**(ಅರ್ಜಿ ಸಲ್ಲಿಕೆಗೆ ನಿಗದಿಪಡಿಸಿರುವ ಪ್ರಾರಂಭದ ದಿನಾಂಕದಂದು ಜಾರಿಯಲ್ಲಿರುವಂತೆ ಸರ್ಕಾರವು ಅಂಗವಿಕಲ ಅಭ್ಯರ್ಥಿಗಳಿಗೆ ನಿಗದಿಪಡಿಸುವ ಸಮತಳ ಮೀಸಲು ಅನ್ವಯವಾಗುತ್ತದೆ)**

**12. ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ: 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

**<u>ಸೂಚನೆ:</u>** 1) ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

2) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

**13. ಆಯ್ಕೆಗೆ ಪರಿಗಣಿಸಲ್ಪಡುವ ಅರ್ಹ ಅಭ್ಯರ್ಥಿಗಳು ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:**

1. ದ್ವಿತೀಯ ದರ್ಜೆ ಸಹಾಯಕ ಬ್ಯಾಕ್‌ಲಾಗ್ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಾದ ಪದವಿ ಪೂರ್ವ ಶಿಕ್ಷಣ ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು.

2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (ಇಥಣಡಿಚಿಥಿಣ ಠಜಿ ಅಣಟಣಟಚಿಣುತಜ ಖಜಥಿಂಡಿಜ).

3. ಇತರೆ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.

**14. ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:**

1. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

**<u>ಟಿಪ್ಪಣಿ:</u> ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.**

2. ಪರಿಶಿಷ್ಟ ಜಾತಿ ಮೀಸಲಾತಿ ಅಭ್ಯರ್ಥಿಗಳು ನಮೂನೆ–ಡಿ ನಲ್ಲಿ ತಹಶೀಲ್ದಾರ್‌ರವರಿಂದ ಪಡೆದಿರುವ ಪ್ರಮಾಣ ಪತ್ರ.
3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಮೊದಲೇ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (ಓಂ ಔಛಿರಿಜಛಿಣುಂಟ ಅಜಡಿಣುಜುಛಿಚಿಣಜ) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಪಡೆದುಕೊಂಡಿರಬೇಕು.
4. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ.
5. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.
6. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ.
7. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು, ಕ್ಯಾಡೆಟ್ ಪರಿವೀಕ್ಷಕರು ಮತ್ತು ತೃತೀಯಲಿಂಗಿ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ನೇಮಕಾತಿ ಪ್ರಾಧಿಕಾರವು ಕೂಲಂಕಷವಾಗಿ ಪರಿಶೀಲಿಸಿದ ನಂತರವೇ ಅಭ್ಯರ್ಥಿಗಳನ್ನು ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

**15. ಪ್ರಮುಖ ಸೂಚನೆಗಳು:**

1. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ನೇಮಕಾತಿ ಪ್ರಾಧಿಕಾರವು ಪರಿಶೀಲಿಸಿ ಆಯ್ಕೆ ಮಾಡುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಸ್ಪಷ್ಟ/ಮಸುಕಾಗಿರುವ ಫೋಟೋ ಮತ್ತು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
5. ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ, ಅಭ್ಯರ್ಥಿಗಳು ಲಿಖಿತ ಮೂಲಕ ತಕ್ಷಣವೇ ನೇಮಕಾತಿ ಪ್ರಾಧಿಕಾರದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಪ್ರಾಧಿಕಾರ ಸಾಧ್ಯವಾದ ಮಟ್ಟಿಗೆ ಪ್ರಯತ್ನಿಸುವುದು. ಆದಾಗ್ಯೂ, ಈ ವಿಚಾರದಲ್ಲಿ ನೇಮಕಾತಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು.
6. ಈ ನೇಮಕಾತಿಯ ಕುರಿತು ನೇಮಕಾತಿ ಪ್ರಾಧಿಕಾರದೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ. **(ಮೇಲ್ಕಂಡ 5ರ ಸೂಚನೆಯನ್ನು ಹೊರತುಪಡಿಸಿ)**

7. ಅಧಿಸೂಚಿಸಿರುವ ಹುದ್ದೆಗಳು ತಾತ್ಕಾಲಿಕವಾಗಿದ್ದು, ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಟ್ಟಿರುತ್ತವೆ.
8. ಸದರಿ ಆಯ್ಕೆ ಪ್ರಕ್ರಿಯೆಯನ್ನು ಮುಂದುವರೆಸುವ ಅಥವಾ ಯಾವುದೇ ಮುನ್ಸೂಚನೆ ಇಲ್ಲದೆ ರದ್ದುಪಡಿಸುವ ಹಕ್ಕನ್ನು ಆಯ್ಕೆ ಸಮಿತಿಯು ಕಾಯ್ದಿರಿಸಿಕೊಂಡಿರುತ್ತದೆ.

**16. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ತಿಳಿದು ಬಂದಲ್ಲಿ ಅಥವಾ ಅವನ ನೇಮಕಾತಿಯ ಸಂದರ್ಭದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹಾರಗಳಿಗೆ ಮತ್ತು ಶಿಸ್ತು ಕ್ರಮಗಳಿಗೆ ಒಳಪಡುತ್ತಾನಲ್ಲದೆ ನೇಮಕಾತಿ ಪ್ರಾಧಿಕಾರವು ಆಯ್ಕೆಯನ್ನು ರದ್ದುಪಡಿಸುವುದು.

**ಅಧ್ಯಕ್ಷರು,**
**ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್**
**ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ**
**ನೇಮಕಾತಿ ಆಯ್ಕೆ ಸಮಿತಿ ಹಾಗೂ**
**ಮುಖ್ಯ ಇಂಜಿನಿಯರ್,**
**ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ,**
**ಆನಂದ ರಾವ್ ವೃತ್ತ, ಬೆಂಗಳೂರು-560 009.**

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005**

## CERTIFICATE FOR THE PERSONS WITH DISABILITIES

This is to certifiy that Sri/Smt/Kum.........................................son /wife/daughtyer of Shri.............................................................................
Age..............................................   old, male/female, Registration No. ..................................................is a case of ....................................He/She is physically disabled/visual disabled/speech
Permanent (physical impaiment  visual impairment speech & hearing impairment) in relation of his/her.........................................
Note:

1. This condition is progressive/non-progressive/likely to improve/not likely to improve."
2. Re-assessment is not recommended/is recommended after a period of .............................months/years."

Strike out which is not applicable

(Recent Attested
Photograph showing
the disability
affixed here)

| Sd/- | Sd/- | Sd/- |
|---|---|---|
| (Doctor) | (Doctor) | (Doctor) |
| (Seal) | (Seal) | (Seal) |

Countersiggned by the
Medical Superidntendent CMO/Head
of Hospital (with seal)

Signature / Thumb impression
of the disabled person

**ನಮೂನೆ–2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ...................................................................... ರವರ ಮಗ / ಮಗಳು/ ಪತಿ/ ಪತ್ನಿ/

ಶ್ರೀ/ಶ್ರೀಮತಿ/ಕುಮಾರಿ ..........................ಜಿಲ್ಲೆ........................ತಾಲ್ಲೂಕು..........................ಗ್ರಾಮದಲ್ಲಿ

.......................ವಾಸವಾಗಿರುವ ಇವರು ಒಂದನೇ ತರಗತಿಯಿಂದ.............................ತರಗತಿಯವರೆಗೆ..................... ................ಜಿಲ್ಲೆ .....................ತಾಲ್ಲೂಕು...............................ಪಟ್ಟಣ...........................ಶಾಲೆಯಲ್ಲಿ ವ್ಯಾಸಂಗ ಮಾಡಿ.........................ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರ
ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ:
ದಿನಾಂಕ:

**ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 44 ಸೆನೆನಿ 2001 ದಿನಾಂಕ: 27.7.2001**

**ನಮೂನೆ–3**

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ.......................................................................... ರವರ ಮಗ / ಮಗಳು/ ಪತಿ/ ಪತ್ನಿ/

ಶ್ರೀ/ಶ್ರೀಮತಿ/ಕುಮಾರಿ ..........................ಜಿಲ್ಲೆ........................ತಾಲ್ಲೂಕು..........................ಗ್ರಾಮದಲ್ಲಿ

.......................ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ..............................ಯೋಜನೆಗಾಗಿ ......................ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

(ಅ) ** ವಾಸಿಸುವ ಮನೆ ಮತ್ತು ತಾವು ಅವಲಂಬಿಇತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) **ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ:

(ಇ) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಒಂದಕ್ಕಿಂತ ಕಡಿಮೆ ಕೃಷಿ ಭೂಮಿ:

(ಈ) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ತಹಶೀಲ್ದಾರ್ ಸಹಿ
ದಿನಾಂಕ: ತಾಲ್ಲೂಕು
ಕಛೇರಿಯ ಮೊಹರು

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು)

**ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ.......................................................................... ರವರ ಮಗ / ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ...........................ಜಿಲ್ಲೆ........................ತಾಲ್ಲೂಕು..........................ಗ್ರಾಮದಲ್ಲಿ......................ವಾಸವಾಗಿರುವ ಇವರು ..........................ನೇ ತರಗತಿಯಿಂದ............................ನೇ ತರಗತಿಯವರೆಗೆ............................ಶೈಕ್ಷಣಿಕ ವರ್ಷದಿಂದ .....................ಶೈಕ್ಷಣಿಕ ವರ್ಷದವರೆಗೆ..........................ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ: **ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು**

**ಅನುಬಂಧ–8**

**(ಪ.ಜಾ/ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಡಿ**

**(ನಿಯಮ 3ಎ (2)(3) ನೋಡಿ)**

**ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

.....................................ರಾಜ್ಯದ / ಕೇಂದ್ರಾಡಳಿತ ಪ್ರದೇಶದ *...........................ಜಿಲ್ಲೆಯ / ವಿಭಾಗದ .............................ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ..............................ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ...................................ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

ಅನುಸೂಚಿತ ಜಾತಿ ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಅನುಸೂಚಿತ ಬುಡಕಟ್ಟುಗಳ ತಿದ್ದುಪಡಿ ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀಪ್) ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ.

2. ಶ್ರೀ/ಶ್ರೀಮತಿ/ಕುಮಾರಿ*....................................ಮತ್ತು / ಅಥವಾ ಅವನ* / ಅವಳ* ಕುಟುಂಬವು ...............................................ರಾಜ್ಯ/ಕೇಂದ್ರಾಡಳಿತ ಪ್ರದೇಶದ .....................ಜಿಲ್ಲಾ/ವಿಭಾಗದ.......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ..........................

ಸ್ಥಳ: ತಹಶೀಲ್ದಾರ್.............................

ದಿನಾಂಕ: ಪದನಾಮ

ಕಛೇರಿಯ ಮೊಹರಿನೊಂದಿಗೆ

**ನಮೂನೆ–1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಶೀಲ್ದಾರರು
......ತಾಲ್ಲೂಕು
..................ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ............................................. ಎಂಬುವವರ ಮಗ / ಮಗಳು / ಪತಿ / ಪತ್ನಿ ................ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ
   :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

   ಪ್ರಾಥಮಿಕ

   ಮಾಧ್ಯಮಿಕ

   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

   1) ವೇತನ ಶ್ರೇಣಿ

2) ಜಮೀನಿನ ವಿವರ

3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ದನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ
ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)
(ಪೂರ್ಣ ವಿಳಾಸದೊಂದಿಗೆ) 2)

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ...................................................................... ಎಂಬುವವರ ಮಗ / ಮಗಳು/ ಪತಿ/ ಪತ್ನಿ/ ಶ್ರೀ/ ಶ್ರೀಮತಿ/ ಕುಮಾರಿ .......................... ಎಂಬುವವರು ಕರ್ನಾಟಕ ರಾಜ್ಯದ ....................ಜಿಲ್ಲೆಯ ವಿಭಾಗ ......................ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ .......................... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್
ದಿನಾಂಕ: ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ–1:** ಇದರಲ್ಲಿ ಉಪಯೋಗಿಸಲಾದ **'ಸಾಮಾನ್ಯ ನಿವಾಸಿ'** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2:** ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**PR-130**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–೫೬.
SUNIL GARDE